**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಲ್ ಭೋಜೇಗೌಡ ಇವರ ನಿಯಮ 72ರಡಿಯ ಗಮನ ಸೆಳೆಯುವ ಸೂಚನೆಗೆ ಉತ್ತರ:-**

**ಗಮನ ಸೆಳೆಯುವ ಸೂಚನೆ:**

ಸರ್ಕಾರಿ ಶಾಲೆಗಳಲ್ಲಿ / ಅನುದಾನಿತ / ಅನುದಾನರಹಿತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ಸಿಗಬೇಕಾದ ಮೂಲಭೂತ ಸೌಲಭ್ಯಗಳು ಕಾಲಕಾಲಕ್ಕೆ ಸಿಗದೇ, ಶಿಕ್ಷಕರುಗಳು ಪರಿತಪಿಸುವಂತೆ ಆಗಿರುವುದು ಶೋಚನೀಯ ಸಂಗತಿ. ಸರ್ಕಾರಿ / ಅನುದಾನಿತ / ಅನುದಾನರಹಿತ ಶಾಲೆಗಳ ಶಿಕ್ಷಕರುಗಳು ಹಲವು ರೀತಿಯ ಬೇಡಿಕೆ ಮತ್ತು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಶಿಕ್ಷಕರ ಗೋಳನ್ನು ಸರ್ಕಾರವು ಕೇಳುವುದರಲ್ಲಿ ವಿಫಲವಾಗಿದೆ. ಶಿಕ್ಷಕರ ಸಮಸ್ಯೆಗಳು ಕಗ್ಗಂಟಿನಿಂದ ಕೂಡಿದ್ದು, ಅದನ್ನು ಬಿಡಿಸುವಲ್ಲಿ ಸರ್ಕಾರವು ವಿಫಲವಾಗಿದೆ. ಸದರಿ ಶಿಕ್ಷಕರುಗಳಿಗೆ ಕಾಲಕಾಲಕ್ಕೆ ಬಡ್ತಿ, ವಿವಿಧ ರೀತಿಯ ಸೌಲಭ್ಯಗಳು ದೊರಕುತ್ತಿದೆಯೇ ಎಂಬುದು ಅನುಮಾನ. ಶಿಕ್ಷಕರುಗಳ ಸಮಸ್ಯೆಗಳ ಬಗ್ಗೆ, ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:-**

**ಸರ್ಕಾರಿ ಪ್ರಾಥಮಿಕ / ಪ್ರೌಢಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ:-**

ಸರ್ಕಾರಿ ಪ್ರಾಥಮಿಕ / ಪ್ರೌಢ ಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ, ಕಾಲ-ಕಾಲಕ್ಕೆ ಚಾಲ್ತಿ ನಿಯಮಗಳನುಸಾರ ನೀಡಬೇಕಾದ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ರಾಜ್ಯದ ಸರ್ಕಾರಿ ಪ್ರಾಥಮಿಕ / ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ಪ್ರತಿ ಮಾಹೆಯ 05ನೇ ತಾರೀಖಿನೊಳಗೆ ವೇತನ ಪಾವತಿಯಾಗುವಂತೆ ಕ್ರಮವಹಿಸಲಾಗಿದೆ.

ಕಾಲ-ಕಾಲಕ್ಕೆ ಸೇವಾ ಜೇಷ್ಠತಾ ಆಧಾರದ ಮೇಲೆ ಪದೋನ್ನತಿ / ಬಡ್ತಿಗಳನ್ನು ಚಾಲ್ತಿ ನಿಯಮಾನುಸಾರ ನೀಡಲಾಗುತ್ತಿದೆ. ಶಿಕ್ಷಕರುಗಳ ವಾರ್ಷಿಕ ವೇತನ ಬಡ್ತಿ, ಕಾಲಮಿತಿ ಬಡ್ತಿ ಸ್ವಯಂ ಚಾಲಿತ ವೇತನ ಬಡ್ತಿ ಮತ್ತು ವಿಶೇಷ ವೇತನ ಬಡ್ತಿಗಳನ್ನು ಹಾಗೂ ವೈದ್ಯಕೀಯ ಮರುಪಾವತಿ ವೆಚ್ಚದೊಂದಿಗೆ ಇತರೆ ಭತ್ಯೆಗಳನ್ನು ಸಹ ವಿಳಂಬಕ್ಕೆ ಅವಕಾಶ ನೀಡದಂತೆ ಕ್ರಮವಹಿಸಲು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ಕಾಲ ಕಾಲಕ್ಕೆ ನೀಡಲಾಗುತ್ತಿದೆ. ಕೆಲವು ವಿಶೇಷ ಪ್ರಕರಣಗಳಲ್ಲಿ ನ್ಯಾಯಾಲಯದ ನಿರ್ದೇಶನಗಳನುಸಾರ ನೀಡಬೇಕಾದ ಭತ್ಯೆಗಳನ್ನು ಕಾಲಮಿತಿಯೊಳಗೆ ನೀಡಲಾಗುತ್ತಿದೆ.

....2

**ಅನುದಾನಿತ ಪ್ರಾಥಮಿಕ/ ಪ್ರೌಢಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ:-**

ಅನುದಾನಿತ ಪ್ರಾಥಮಿಕ / ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಕಾಲಕಾಲಕ್ಕೆ, ಬಡ್ತಿ, ಕಾಲಮಿತಿ ಬಡ್ತಿ, ಸ್ವಯಂಚಾಲಿತ ಬಡ್ತಿ, 20, 25 ಹಾಗೂ 30 ವರ್ಷಗಳ ಹೆಚ್ಚುವರಿ ವೇತನ ಬಡ್ತಿ, ಸ್ಥಗಿತ ವೇತನ ಬಡ್ತಿಗಳನ್ನು ಆಡಳಿತ ಮಂಡಳಿ ಮಂಜೂರು ಮಾಡಿ ಅನುಮೋದನೆಗೆ ಸಲ್ಲಿಸುತ್ತಿರುವ ಪ್ರಸ್ತಾವನೆಗಳನ್ನು ಪರಿಶೀಲಿಸಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ನೀಡಿ ಶಿಕ್ಷಕರುಗಳಿಗೆ ದೊರಕುವ ವಿವಿಧ ರೀತಿಯ ಸೌಲಭ್ಯಗಳನ್ನು ನೀಡಲಾಗುತ್ತಿದೆ.

**ಅನುದಾನರಹಿತ ಖಾಸಗಿ ಪ್ರಾಥಮಿಕ / ಪ್ರೌಢ ಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ:-**

ಅನುದಾನರಹಿತ ಶಾಲಾ ಶಿಕ್ಷಕರುಗಳಿಗೆ ಶಿಕ್ಷಣ ಕಾಯ್ದೆ / ನಿಯಮಗಳನ್ವಯ ಶಿಕ್ಷಕರ ವೇತನ ಶ್ರೇಣಿಯ ಕನಿಷ್ಟ ವೇತನಕ್ಕೆ ಕಡಿಮೆ ಇಲ್ಲದಷ್ಟು ವೇತನ ಸೌಲಭ್ಯಗಳನ್ನು ನೀಡಲು ಹಾಗೂ ಸೇವಾ ಭದ್ರತೆ ಒದಗಿಸುವ ಬಗ್ಗೆ ಕಾಲ-ಕಾಲಕ್ಕೆ ಸುತ್ತೋಲೆಗಳ ಮೂಲಕ ಮಾನ್ಯತೆ ನವೀಕರಿಸುವ ಸಂದರ್ಭದಲ್ಲಿ ಪರಿಶೀಲಿಸಿ ಅಗತ್ಯ ಕ್ರಮವಹಿಸಲು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಕ್ಕೆ ಸೂಚಿಸಲಾಗಿರುತ್ತದೆ. ಅದರಂತೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರವು ವಿವಿಧ ಹಂತಗಳಲ್ಲಿ ಪರಿಶೀಲಿಸಿ ಮಾನ್ಯತೆ ನವೀಕರಣಕ್ಕೆ ಕ್ರಮವಹಿಸಲಾಗುತ್ತಿದೆ.

**ಇಪಿ 305 ಪಿಎಂಸಿ 2025**

**(ಎಸ್.ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು